# ಕರ್ನಾಟಕ ಸರ್ಕಾರ

**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಕೆ.ಆರ್. ವೃತ್ತ**

ಸಂಖ್ಯೆ: ಸಿ1(7) ಆ.ಋ.ಪ.-147/2009-10 ದಿನಾಂಕ: 02-08-2011

ಸುತ್ತೋಲೆ

ವಿಷಯ: ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಮತ್ತು ಮೈಸೂರು ವಿಭಾಗಗಳ ವ್ಯಾಪ್ತಿಯ ಗ್ರೂಪ್-ಬಿ ಮತ್ತು ತತ್ಸಮಾನ ವೃಂದದ ಅಧಿಕಾರಿಗಳ ಆಸ್ತಿ ಮತ್ತು ಹೊಣೆಗಾರಿಕೆ ತ:ಖ್ತೆಯನ್ನು ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ/ಸೇನಿಸಿ-92 ದಿ:26-04-94.
2. ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 62 ಎಇಎಆರ್ 2002 ದಿ:22-7-2002.
3. ಈ ಕಛೇರಿಯ ಸುತ್ತೋಲೆ ಸಮಸಂಖ್ಯೆ ದಿನಾಂಕ: 21-11-2002, 30-10-2003, 30-03-2004, 10-05-2007 ಹಾಗೂ 26-04-2008, 06-08-2008.

-000-

ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮ 1966ರ ಉಪ ನಿಯಮ 22ರ ಪ್ರಕಾರ ಎಲ್ಲಾ ಸರ್ಕಾರಿ ನೌಕರರು ಮೊದಲು ಸೇವೆಗೆ ಸೇರಿದಾಗ ಮತ್ತು ಪ್ರತಿ ವರ್ಷ ಮಾರ್ಚ್ 31ರಲ್ಲಿದ್ದಂತೆ ತಮ್ಮ ಮತ್ತು ತಮ್ಮ ಕುಟುಂಬದ ಸದಸ್ಯರ ಹೆಸರಿನಲ್ಲಿರುವ ಆಸ್ತಿ ಮತ್ತು ಋಣ ಪಟ್ಟಿಯನ್ನು ಸಲ್ಲಿಸುವುದು ಕಡ್ಡಾಯವಾಗಿದೆ.

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಮತ್ತು ಮೈಸೂರು ವಿಭಾಗಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರೂಪ್-ಬಿ ವೃಂದದ ಮತ್ತು ತತ್ಸಮಾನ ವೃಂದದ ಅಧಿಕಾರಿಗಳು ಪ್ರತಿ ವರ್ಷ ಏಪ್ರಿಲ್ 30ರೊಳಗಾಗಿ ನಿಗಧಿತ ನಮೂನೆಯಲ್ಲಿ ಪೂರ್ಣವಾದ ಮಾಹಿತಿಗಳನ್ನು ಭರ್ತಿ ಮಾಡಿ ಪೂರಕ ದಾಖಲೆಗಳ ಪ್ರತಿಗಳೊಂದಿಗೆ ಆಸ್ತಿ-ಋಣ ಪಟ್ಟಿಯನ್ನು ಸಲ್ಲಿಸುವ ಬಗ್ಗೆ ಮಾರ್ಗಸೂಚಿಯನ್ನು ಈ ಕಛೇರಿಯ ಉಲ್ಲೇಖಿತ ಸುತ್ತೋಲೆಗಳಲ್ಲಿ ಈಗಾಗಲೇ ತಿಳಿಸಲಾಗಿದೆ.

ಆದರೂ ಸಹ, ಕೆಲವು ಅಧಿಕಾರಿಗಳು ನಿಗಧಿತ ದಿನಾಂಕದೊಳಗಾಗಿ ತಮ್ಮ ಆಸ್ತಿ ಋಣಪಟ್ಟಿಯನ್ನು ಸಲ್ಲಿಸದೇ ಇರುವುದು ಮತ್ತು ಅಪೂರ್ಣವಾದ ಮಾಹಿತಿಗಳನ್ನು ಸಲ್ಲಿಸುವುದನ್ನು ತೀವ್ರವಾಗಿ ಗಮನಿಸಲಾಗಿದೆ. ಈ ಬಗ್ಗೆ ಅನೇಕ ಬಾರಿ ಸುತ್ತೋಲೆಗಳನ್ನು ಹೊರಡಿಸಿ ಆಸ್ತಿ-ಋಣ ಪಟ್ಟಿ ದಾಖಲೆಗಳನ್ನು ಸಲ್ಲಿಸುವ ಬಗ್ಗೆ ಸ್ಪಷ್ಟವಾಗಿ ತಿಳಿಸಿದ್ದರೂ ಸಹ ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸದೇ ಇರುವುದು ಕಂಡುಬರುತ್ತದೆ.

ಈಗಾಗಲೇ ಉಲ್ಲೇಖಿತ ಈ ಕಛೇರಿಯ ಸುತ್ತೋಲೆಗಳಲ್ಲಿ ತಿಳಿಸಿರುವಂತೆ ಈ ಇಲಾಖೆಯ ಬೆಂಗಳೂರು ವಿಭಾಗದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳು ಅವರ ವೃಂದದ ಮುಂದೆ ಸೂಚಿಸಿರುವ ಸಕ್ಷಮ ಪ್ರಾಧಿಕಾರಕ್ಕೆ ದಿನಾಂಕ:31-03-2011ಕ್ಕೆ ಇದ್ದಂತೆ ಆಸ್ತಿ-ಋಣ ಪಟ್ಟಿಯನ್ನು ದಿನಾಂಕ: 31-08-2011ರೊಳಗೆ ಪೂರಕ ದಾಖಲೆಗಳೊಂದಿಗೆ ಮತ್ತು ಈ ಸಾಲಿನಲ್ಲಿ ಪಡೆಯಲಾದ ವೇತನ ವಿವರಗಳು, ಕಡಿತ, ವರಮಾನ ತೆರಿಗೆ, ಇತ್ಯಾದಿ ವಿವರಗಳನ್ನು ತೋರಿಸುವ ತ:ಖ್ತೆಯೊಂದಿಗೆ ಸಲ್ಲಿಸುವಂತೆ ಮತ್ತು ಈ ಸೂಚನೆಯನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಿದೆ.

| | ಅಧಿಕಾರಿಗಳ ವೃಂದ | ಸಲ್ಲಿಸಬೇಕಾದ ಪ್ರಾಧಿಕಾರ |
|---|---|---|
| ಗ್ರೂಪ್-ಬಿ ವೃಂದದ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಮತ್ತು ತತ್ಸಮಾನ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿಗಳು | | |
| 1. | ಬೆಂಗಳೂರು ವಿಭಾಗದ ಅಧಿಕಾರಿಗಳು | ಜಂಟಿ ನಿರ್ದೇಶಕರು (ಆಡಳಿತ)<br>ಆಯುಕ್ತರ ಕಛೇರಿ,<br>ಸಾರ್ವಜನಿಕ ಶಿಕ್ಷಣ ಇಲಾಖೆ<br>ನೃಪತುಂಗ ರಸ್ತೆ, ಬೆಂಗಳೂರು |
| 2. | ಮೈಸೂರು ವಿಭಾಗದ ಅಧಿಕಾರಿಗಳು | ಸಹ ನಿರ್ದೇಶಕರು,<br>ಸಾರ್ವಜನಿಕ ಶಿಕ್ಷಣ ಇಲಾಖೆ<br>ಮೈಸೂರು ವಿಭಾಗ |

ಮೇಲೆ ತಿಳಿಸಿರುವಂತೆ ಆಸ್ತಿ ಮತ್ತು ಋಣಪಟ್ಟಿಗಳನ್ನು ಎಲ್ಲಾ ಅಂಶಗಳನ್ನು ಒಳಗೊಂಡಂತೆ ಸೂಕ್ತ ರೀತಿಯಲ್ಲಿ ಭರ್ತಿ ಮಾಡಿ, ಪ್ರತಿ ವರ್ಷ ಏಪ್ರಿಲ್ 30ರೊಳಗೆ ತಪ್ಪದೇ ಸಂಬಂಧಪಟ್ಟ ಪ್ರಾಧಿಕಾರಕ್ಕೆ ಸಲ್ಲಿಸುವಂತೆ ಸೂಚಿಸಿದೆ. ಒಂದು ವೇಳೆ ನಿಗಧಿತ ಅವಧಿಯೊಳಗೆ ಸಲ್ಲಿಸದಿದ್ದಲ್ಲಿ ಅಥವಾ ಪೂರ್ಣವಾದ ಮಾಹಿತಿಗಳನ್ನು ಒದಗಿಸದಿದ್ದಲ್ಲಿ ಅಂತಹ ಅಧಿಕಾರಿಗಳ ಮೇಲೆ ಕ.ನಾ.ಸೇ.ನಿಯಮ (ನಡತೆ) 1966ರ ನಿಯಮ ಉಲ್ಲಂಘಿಸಿರುವರೆಂದು ಭಾವಿಸಿ ನಿಯಮಾನುಸಾರ ಶಿಸ್ತಿನ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಮತ್ತೊಮ್ಮೆ ಸ್ಪಷ್ಟವಾಗಿ ತಿಳಿಸಿದೆ.

ಜಿಲ್ಲಾ ಉಪನಿರ್ದೇಶಕರು ತಮ್ಮ ವ್ಯಾಪ್ತಿಯಲ್ಲಿಬರುವ ಗ್ರೂಪ್-ಬಿ ವೃಂದದ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಮತ್ತು ತತ್ಸಮಾನ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿಗಳ ಆಸ್ತಿ-ಋಣ ಪಟ್ಟಿಗಳನ್ನು ಒಮ್ಮೆಲೇ ಪಡೆದು ಈ ಕಛೇರಿಗೆ ಸಲ್ಲಿಸಲು ತಿಳಿಸಿದೆ.

(ಎಸ್. ಬಿ. ಪಾಟೀಲ)
ಜಂಟಿ ನಿರ್ದೇಶಕರು (ಆಡಳಿತ)

ಇವರಿಗೆ:

01 ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಶಿಕ್ಷಣ ಇಲಾಖೆ, ಬಹು ಮಹಡಿಗಳ ಕಟ್ಟಡ, ಬೆಂಗಳೂರು ರವರಿಗೆ ವಂದನಾಪೂರ್ವಕವಾಗಿ.
02 ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ ಗುಲ್ಬರ್ಗ ರವರಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
03 ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ ರವರಿಗೆ ಮಾಹಿತಿಗಾಗಿ.
04 ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರು.
05 ಎಲ್ಲಾ ಜಿಲ್ಲಾ ಪಂಚಾಯತ್ ಕಾರ್ಯ ನಿರ್ವಹಣಾಧಿಕಾರಿಗಳಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
06 ಮಾನ್ಯ ಆಯುಕ್ತರ ಆಪ್ತ ಕಾರ್ಯದರ್ಶಿಗಳಿಗೆ.
07 ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಸಹ ನಿರ್ದೇಶಕರು ಹಾಗೂ ಸಿ.ಟಿ.ಇ.ಗಳಲ್ಲಿನ ಪ್ರಾಂಶುಪಾಲರುಗಳಿಗೆ ಅಗತ್ಯ ಕ್ರಮಕ್ಕಾಗಿ.
08 ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು(ಆಡಳಿತ) ಹಾಗೂ ಎಲ್ಲಾ ಡಯಟ್ ಪ್ರಾಂಶುಪಾಲರಿಗೆ ಅಗತ್ಯ ಕ್ರಮಕ್ಕಾಗಿ.
09 ಕೇಂದ್ರ ಕಛೇರಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ಸಹ ನಿರ್ದೇಶಕರು /ಉಪನಿರ್ದೇಶಕರು /ಹಿರಿಯ ಸಹಾಯಕ ನಿರ್ದೇಶಕರುಗಳಿಗೆ ಮಾಹಿತಿಗಾಗಿ.
10 ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
11 ರಾಜ್ಯದ ಎಲ್ಲಾ ಜಿಲ್ಲಾ ಉಪಯೋಜನಾ ಸಮನ್ವಯಾಧಿಕಾರಿಗಳು, ಸರ್ವ ಶಿಕ್ಷಣ ಅಭಿಯಾನ ಹಾಗೂ ಶಿಕ್ಷಣಾಧಿಕಾರಿಗಳು, ಅಕ್ಷರ ದಾಸೋಹ ರವರಿಗೆ.
12 ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಆಯುಕ್ತರ ಕಛೇರಿ, ಬೆಂಗಳೂರು ಇವರಿಗೆ ಸುತ್ತೋಲೆಯನ್ನು ಮುಂದಿನ ಶಿಕ್ಷಣ ವಾರ್ತಾ ಸಂಚಿಕೆಯಲ್ಲಿ ಪ್ರಕಟಿಸಲು ಕೋರಿದೆ.
13 ಕಛೇರಿ ಪ್ರತಿ.